**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು ಇವರು "ಕೋಲಾರ ಜಿಲ್ಲೆಯ ಅರೆಹಳ್ಳಿ ಗ್ರಾಮದಲ್ಲಿರುವ ಸರ್ಕಾರಿ ಕಾನೂನು ಕಾಲೇಜಿಗೆ ವಸತಿ ನಿಲಯ ವ್ಯವಸ್ಥೆ, ಮೂಲಭೂತ ಸೌಲಭ್ಯ ಬೋಧಕ / ಬೋಧಕೇತರ ಸಿಬ್ಬಂದಿಯನ್ನು ನಿಯೋಜಿಸುವ ಬಗ್ಗೆ" ನಿಯಮ 72 ರಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

ಕೋಲಾರದ ಸರ್ಕಾರಿ ಕಾನೂನು ಕಾಲೇಜನ್ನು 1996ರಲ್ಲಿ ಪ್ರಾರಂಭವಾಗಿದ್ದು, ಐದು ವರ್ಷಗಳ ಕಾನೂನು ಪದವಿ ಕೋರ್ಸನ್ನು ಹೊಂದಿದ್ದು, ಪ್ರಸ್ತುತ 254 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುತ್ತಾರೆ.

ಸದರಿ ಕಾಲೇಜಿಗೆ ಮೂಲಭೂತ ಸೌಕರ್ಯಗಳ ಕೊರತೆಯನ್ನು ನೀಗಿಸುವ ಸಲುವಾಗಿ 2015-16ನೇ ಸಾಲಿನಲ್ಲಿ ರೂ.51.00 ಲಕ್ಷಗಳು ಹಾಗೂ 2018-19ನೇ ಸಾಲಿನಲ್ಲಿ ರೂ.210.00 ಲಕ್ಷಗಳನ್ನು ಒದಗಿಸಿಕೊಂಡು ಈಗಾಗಲೇ ಅಗತ್ಯ ಕ್ರಮ ಕೈಗೊಳ್ಳಲಾಗಿದೆ, ವಿವರಗಳನ್ನು **ಅನುಬಂಧ-1** ರಲ್ಲಿ ನೀಡಲಾಗಿದೆ. ವಿವಿಧ ವಿಷಯಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳೂ ಒಳಗೊಂಡಂತೆ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಇಲಾಖೆಯ ಅಂತಿಮ ವಿಶೇಷ ನೇಮಕಾತಿ ನಿಯಮಾವಳಿಗಳನ್ನು ರೂಪಿಸಿ, ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/257/ಡಿಸಿಇ/2019(ಭಾ-3), ದಿನಾಂಕ:08.07.2020 ಮತ್ತು ತಿದ್ದುಪಡಿ ಅಧಿಸೂಚನೆ ದಿನಾಂಕ:19.10.2020 ರಲ್ಲಿ ಪ್ರಕಟಿಸಲಾಗಿದೆ. ಸದರಿ ವಿಶೇಷ ನೇಮಕಾತಿ ನಿಯಮಗಳನ್ವಯ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಭರ್ತಿ ಮಾಡಲು ಸರ್ಕಾರವು ದಿನಾಂಕ:26.08.2021 ರ ಸಂಖ್ಯೆ:ಇಡಿ/257/ಡಿಸಿಇ/2019ರಲ್ಲಿ ಅಧಿಸೂಚನೆ ಹೊರಡಿಸಿದ್ದು, ಅದರಂತೆ ಆಯ್ಕೆ ಪ್ರಾಧಿಕಾರವಾದ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿ, ಅಧಿಸೂಚನೆ ಹೊರಡಿಸಿದೆ. ಉಪನ್ಯಾಸಕರ ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಆಯ್ಕೆಮಾಡಿದ ಅಭ್ಯರ್ಥಿಗಳ ಆಯ್ಕೆಪಟ್ಟಿಯನ್ನು ಸರ್ಕಾರ/ಇಲಾಖೆಗೆ ನೀಡಿದ ನಂತರ ಸದರಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಕ್ರಮ ವಹಿಸಲಾಗುವುದು. ಮುಂದುವರೆದು, ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಕೋಲಾರದ ಸರ್ಕಾರಿ ಕಾನೂನು ಕಾಲೇಜಿನಲ್ಲಿ ವಿವಿಧ ವಿಷಯಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಬೋಧನಾ ಕಾರ್ಯಭಾರವನ್ನು ನಿರ್ವಹಿಸಲು ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಂಡು ಪಾಠ-ಪ್ರವಚನಗಳನ್ನು ನಡೆಸಲಾಗುತ್ತಿದೆ.

ಬೋಧಕೇತರ ಹುದ್ದೆಗಳಲ್ಲಿ ಕೋಲಾರದ ಸರ್ಕಾರಿ ಕಾನೂನು ಕಾಲೇಜು ಒಳಗೊಂಡಂತೆ ಇಲಾಖೆಯಲ್ಲಿನ ಪ್ರಥಮ ದರ್ಜೆ ಮತ್ತು ದ್ವಿತೀಯ ದರ್ಜೆ ಸಹಾಯಕರ ಒಟ್ಟು 211 ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಕರ್ನಾಟಕ ಲೋಕ ಸೇವಾ ಆಯೋಗವು ನೇಮಕಾತಿಗೆ ಅಧಿಸೂಚನೆಯನ್ನು ಹೊರಡಿಸಿದ್ದು, ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಆಯ್ಕೆ ಪಟ್ಟಿಯನ್ನು ನೀಡಿದ ನಂತರ ಸದರಿ ಖಾಲಿ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಲು ಕ್ರಮವಹಿಸಲಾಗುವುದು ಹಾಗೂ ಖಾಲಿ ಇರುವ ಗ್ರೂಪ್-ಡಿ ಸಿಬ್ಬಂದಿಗಳ ಸೇವೆಯನ್ನು ಹೊರಗುತ್ತಿಗೆ ಆಧಾರದ ಮೇಲೆ ಪಡೆಯಲು ಕ್ರಮವಹಿಸಲಾಗುತ್ತಿದೆ. ಸರ್ಕಾರಿ ಕಾನೂನು ಕಾಲೇಜು, ಕೋಲಾರ ಇಲ್ಲಿಗೆ ಮಂಜೂರಾಗಿರುವ, ಕರ್ತವ್ಯ ನಿರತ, ಖಾಲಿ ಹುದ್ದೆ ಮಾಹಿತಿ ಹಾಗೂ ಅತಿಥಿ ಉಪನ್ಯಾಸಕರ ವಿವರಗಳನ್ನು **ಅನುಬಂಧ-2** ರಲ್ಲಿ ನೀಡಲಾಗಿದೆ.

ವಸತಿ ನಿಲಯವನ್ನು ಪ್ರಾರಂಭಿಸುವ ವಿಷಯವು ಕಾನೂನು ಇಲಾಖೆಯ ವ್ಯಾಪ್ತಿಗೆ ಬರುವುದಿಲ್ಲ. ವಿದ್ಯಾರ್ಥಿಗಳು ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿನಿಲಯಗಳಲ್ಲಿ ಸೌಲಭ್ಯವನ್ನು ಪಡೆದುಕೊಳ್ಳಬಹುದಾಗಿದೆ.

**ಸಂಖ್ಯೆ: ಲಾ - ಹೆಚ್‌ಆರ್‌ಎಮ್/35 /2022**

(ಜೆ.ಸಿ. ಮಾಧುಸ್ವಾಮಿ)
ಕಾನೂನು ಹಾಗೂ ಸಂಸದೀಯ ವ್ಯವಹಾರಗಳು
ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು

**ಅನುಬಂಧ-1**

## ಕಾನೂನು ಇಲಾಖೆ (ಮಾನವ ಹಕ್ಕುಗಳ ಶಾಖೆ)

| Name & address of the College | Est Cost | AA Revised Est Cost | HOA | Work Details | Agency | Sanct Year | Total Release | Balance | Physical Progress |
|---|---|---|---|---|---|---|---|---|---|
| Govt. Law College, Kolar | 51.00 | 51.00 | General | Add C R | KHB | 2015-16 | 47.00 | 4.00 | Work Completed |
| Govt. Law College, Kolar | 100.00 | 100.00 | General | Add C R | RITES | 2018-19 | 100.00 | 0.00 | Foundation work U/p |
| Govt. Law College, Kolar | 35.00 | 35.00 | General | Lab Build | RITES | 2018-19 | 35.00 | 0.00 | Foundation work U/p |
| Govt. Law College, Kolar | 60.00 | 60.00 | General | Library | RITES | 2018-19 | 57.00 | 3.00 | Foundation work U/p |
| Govt. Law College, Kolar | 15.00 | 15.00 | General | Toilet | RITES | 2018-19 | 15.00 | 0.00 | Foundation work U/p |

(ಸೋನಿಕಾ)
ಸರ್ಕಾರದ ಅಧೀನ ಕಾರ್ಯದರ್ಶಿ
ಕಾನೂನು ಇಲಾಖೆ (ಮಾನವ ಹಕ್ಕುಗಳು)

**ಅನುಬಂಧ-2**

## ಕಾನೂನು ಇಲಾಖೆ (ಮಾನವ ಹಕ್ಕುಗಳ ಶಾಖೆ)

| ಕ್ರ ಸಂ. | ವಿಷಯ | ಮಂಜೂರಾದ ಹುದ್ದೆ | ಕಾರ್ಯನಿರತ ಉಪನ್ಯಾಸಕರು | ಖಾಲಿ ಹುದ್ದೆ | ಈ ಕಾಲೇಜಿನಿಂದ ಬೇರೆ ಕಾಲೇಜಿಗೆ ನಿಯೋಜನೆಗೊಂಡ ಉಪನ್ಯಾಸಕರು | ಅತಿಥಿ ಉಪನ್ಯಾಸಕರ ಸಂಖ್ಯೆ |
|---|---|---|---|---|---|---|
| | | | **ಬೋಧಕರು** | | | |
| 1 | ಪ್ರಾಂಶುಪಾಲರು | 1 | 0 | 1 | 0 | 0 |
| 2 | ಇತಿಹಾಸ | 0 | 0 | 0 | 0 | 1 |
| 3 | ಕಾನೂನು | 11 | 7 | 4 | 2 | 1 |
| 4 | ರಾಜ್ಯಶಾಸ್ತ್ರ | 1 | 0 | 1 | 0 | 0 |
| 5 | ಸಮಾಜಶಾಸ್ತ್ರ | 1 | 1 | 0 | 0 | 0 |
| 6 | ದೈಹಿಕ ಶಿಕ್ಷಣ ನಿರ್ದೇಶಕರು | 1 | 1 | 0 | 0 | 0 |
| 7 | ಗ್ರಂಥಪಾಲಕರು | 1 | 0 | 1 | 0 | 0 |
| | **ಒಟ್ಟು** | **16** | **9** | **7** | **2** | **2** |

**ಬೋಧಕೇತರರು**

| ಕ್ರ ಸಂ. | ವೃಂದ | ಮಂಜೂರಾದ ಹುದ್ದೆ | ಕಾರ್ಯನಿರತ ಸಿಬ್ಬಂದಿ | ಖಾಲಿ ಹುದ್ದೆ |
|---|---|---|---|---|
| 1 | ಅಧೀಕ್ಷಕರು | 1 | 1 | 0 |
| 2 | ಪ್ರ.ದ.ಸ | 1 | 0 | 1 |
| 3 | ದ್ವಿ.ದ.ಸ | 2 | 0 | 2 |
| 4 | ಬೆರಳಚ್ಚುಗಾರರು | 1 | 0 | 1 |
| 5 | ಗ್ರಂಥಾಲಯ ಸಹಾಯಕ | 1 | 0 | 1 |
| 6 | ಅಟೆಂಡರ್ | 2 | 1 | 1 |
| 7 | ಪರಿಚಾರಕರು | 2 | 0 | 2 |
| | **ಒಟ್ಟು** | **10** | **2** | **8** |

(ಸೋನಿಕಾ)
ಸರ್ಕಾರದ ಅಧೀನ ಕಾರ್ಯದರ್ಶಿ
ಕಾನೂನು ಇಲಾಖೆ (ಮಾನವ ಹಕ್ಕುಗಳು)